



ದ

THE RURAL MIRROR Constructive Media

www.theruralmirror.com

ಇ-ಪತ್ರಿಕೆ

26-07-2025





# ರೂರಲ್ ಮಿರರ್.ಕಾಂ


## ಹವಾಮಾನ ಬದಲಾವಣೆಯಿಂದಾಗಿ ಬೆಲೆ ಏರಿಕೆಯಾಗಿವೆ



ಹೀಟ್ ವೇವ್ ಕಾರಣದಿಂದ 2024 ರಲ್ಲಿ ಭಾರತದಲ್ಲಿ ಆಹಾರ ಪದಾರ್ಥಗಳ ಬೆಲೆಗಳು ತೀವ್ರವಾಗಿ ಏರಿಕೆ ಕಂಡಿದ್ದು, ವರ್ಷದ ಎರಡನೇ ತ್ರೈಮಾಸಿಕದಲ್ಲಿ ಈರುಳ್ಳಿ ಮತ್ತು ಆಲೂಗಡ್ಡೆ ಬೆಲೆಗಳು ಶೇಕಡಾ 80 ಕ್ಕಿಂತ ಹೆಚ್ಚು ಏರಿಕೆಯಾಗಿವೆ ಎಂದು ಹೊಸ ಅಧ್ಯಯನವೊಂದು ತಿಳಿಸಿದೆ.

ಬಾರ್ಸಿಲೋನಾ ಸೂಪರ್‌ಕಂಪ್ಯೂಟಿಂಗ್ ಸೆಂಟರ್‌ನ ಮ್ಯಾಕ್ಸಿಮಿಲಿಯನ್ ಕೋಟ್ಜ್ ನೇತೃತ್ವದಲ್ಲಿ ಯುರೋಪಿಯನ್ ಸೆಂಟ್ರಲ್ ಬ್ಯಾಂಕ್, ಪಾಟ್ಸ್‌ಡ್ಯಾಮ್ ಇನ್‌ಸ್ಟಿಟ್ಯೂಟ್ ಫಾರ್ ಕ್ಲೈಮೇಟ್ ಇಂಪ್ಯಾಕ್ಟ್ ರಿಸರ್ಚ್ ಮತ್ತು ಯುಕೆಯ ಫುಡ್ ಫೌಂಡೇಶನ್‌ನ ಸಂಶೋಧಕರನ್ನು ಒಳಗೊಂಡ ಈ ಅಧ್ಯಯನವು 2022 ಮತ್ತು 2024 ರ ನಡುವೆ 18 ದೇಶಗಳಲ್ಲಿ 16 ತೀವ್ರ ಹವಾಮಾನ ಚಾಲಿತ ಆಹಾರ ಬೆಲೆಗಳ ಏರಿಳಿತಗಳ ಬಗ್ಗೆ ಅಧ್ಯಯನ ನಡೆಸಿತ್ತು.

ಭಾರತದಲ್ಲಿ, ಮೇ ತಿಂಗಳಿನ ಹೀಟ್ ವೇವ್ ನಂತರ 2024 ರ ಎರಡನೇ ತ್ರೈಮಾಸಿಕದಲ್ಲಿ ಈರುಳ್ಳಿ ಮತ್ತು ಆಲೂಗಡ್ಡೆಯ ಬೆಲೆ ಶೇಕಡಾ 80 ಕ್ಕಿಂತ ಹೆಚ್ಚು ಜಿಗಿದಿದೆ, ಇದು ವಿಶಿಷ್ಟ ಘಟನೆಯಾಗಿದ್ದು, ಹವಾಮಾನ ಬದಲಾವಣೆಯಿಂದ ಕನಿಷ್ಠ 1.5 ಡಿಗ್ರಿ ಸೆಲ್ಸಿಯಸ್ ತಾಪಮಾನ ಹೆಚ್ಚಾಗಿದೆ ಎಂದು ಸಂಶೋಧಕರು ಹೇಳಿದ್ದಾರೆ.2024 ರಲ್ಲಿ ದಾಖಲೆಯ ಅತ್ಯಂತ ತಾಪಮಾನದ ವರ್ಷವಾಗಿತ್ತು ಮತ್ತು ಜಾಗತಿಕ ಸರಾಸರಿ ತಾಪಮಾನವು ಕೈಗಾರಿಕಾ ಪೂರ್ವದ ಅತ್ಯಂತ ತಾಪಮಾನದ ವರ್ಷವಾಗಿತ್ತು ಮತ್ತು ಜಾಗತಿಕ ಸರಾಸರಿ ತಾಪಮಾನವು ಕೈಗಾರಿಕಾ ಪೂರ್ವದ ಮಟ್ಟಕ್ಕಿಂತ 1.5 ಡಿಗ್ರಿ ಸೆಲ್ಸಿಯಸ್ ಗಿಂತ ಹೆಚ್ಚಿತ್ತು.

ಭಾರತದಲ್ಲಿ, ಮೇ ತಿಂಗಳಿನಲ್ಲಿ ಉಂಟಾದ ತೀವ್ರ ಉಷ್ಣತೆಯು ಬೆಳೆ ಇಳುವರಿ ಮತ್ತು ಪೂರೈಕೆ . ಸರಪಳಿಗಳ ಮೇಲೆ ತೀವ್ರ ಪರಿಣಾಮ ಬೀರಿತು, ಇದು ಅಗತ್ಯ ತರಕಾರಿಗಳಲ್ಲಿ ಹೆಚ್ಚಿನ ಹಣದುಬ್ಬರಕ್ಕೆ ಕಾರಣವಾಯಿತು. ಆಹಾರ ಬೆಲೆಗಳ ಮೇಲಿನ ಇಂತಹ ಆಘಾತಗಳು ಅಪೌಷ್ಟಿಕತೆ ಮತ್ತು ದೀರ್ಘಕಾಲದ ಕಾಯಿಲೆಗಳು ಸೇರಿದಂತೆ ಆರೋಗ್ಯದ ಪರಿಣಾಮಗಳನ್ನು ಇನ್ನಷ್ಟು ಹದಗೆಡಿಸಬಹುದು ಮತ್ತು ಆರ್ಥಿಕ ಅಸಮಾನತೆಯನ್ನು ಹೆಚ್ಚಿಸಬಹುದು ಎಂದು ಅಧ್ಯಯನವು ಎಚ್ಚರಿಸಿದೆ.


ಹೆಚ್ಚಿನ ಓದಿಗೆ : www.theruralmirror.com


## ಮರಳು ಖರೀದಿ, ಸಾಗಾಟಕ್ಕೆ ಆ್ಯಪ್ ಚಾಲನೆ



ದಕ್ಷಿಣ ಜಿಲ್ಲೆಯಲ್ಲಿ ನಾನ್-ಸೀಆರ್ಝೆಡ್ ದೇಶದಲ್ಲಿ ಗುರುತಿಸಿ ಮಂಜೂರಾಗಿರುವ 15 ಮರಳು ಬ್ಲಾಕ್‌ಗಳಲ್ಲಿನ ಮರಳು ದಾಸ್ತಾನನ್ನು ಸಾರ್ವಜನಿಕರಿಗೆ, ಅಭಿವೃದ್ಧಿ ಕಾಮಗಾರಿಗಳಿಗೆ ಡಿಕೆ ಸ್ಯಾಂಡ್ ಬಝಾರ್ ಆ್ಯಪ್ ಮೂಲಕ ಪೂರೈಸಲು ಜಿಲ್ಲಾ ಮರಳು ಉಸ್ತುವಾರಿ ಸಮಿತಿಯಲ್ಲಿ ತೀರ್ಮಾನಿಸಲಾಗಿರುತ್ತದೆ. ಮರಳನ್ನು ಸಾಗಾಟ ಮಾಡಲು ಇಚ್ಛಿಸುವವರು ತಮ್ಮ ವಾಹನವನ್ನು ಜಿಲ್ಲಾ ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಿರುವ ಡಿಕೆ ಸ್ಯಾಂಡ್ ಬಝಾರ್ ಆ್ಯಪ್‌ನಲ್ಲಿ ನೋಂದಾಯಿಸಿಕೊಳ್ಳಬಹುದು. DK SAND BAZAARAPP ಮುಖಾಂತರ ಜಿಲ್ಲಾ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ/ ಅಭಿವೃದ್ಧಿ ಕಾಮಗಾರಿಗಳಿಗೆ ಮರಳನ್ನು ವಿತರಿಸುವ ಕಾರ್ಯ ಪ್ರಾರಂಭಗೊಂಡಿದ್ದು, ಮರಳು ಅವಶ್ಯಕತೆ ಇರುವವರು ಆನ್‌ಲೈನ್ (DK SAND BAZAARAPP) ಮುಖಾಂತರ ಪಡೆಯಬಹುದು.

15 ಮರಳು ಬ್ಲಾಕ್‌ಗಳಲ್ಲಿ 3,30,405 ಮೆ.ಟನ್ ಪರಿಸರ ವಿಮೋಚನಾ ಪತ್ರದಲ್ಲಿ ಮರಳು ಗಣಿಗಾರಿಕೆ ಮಾಡಲು ಲಭ್ಯವಿದ್ದು, ಪರಿಸರ ವಿಮೋಚನಾ ಪತ್ರದನ್ವಯ ಪ್ರತಿ ವರ್ಷ ಜೂನ್ 5 ರಿಂದ ಅಕ್ಟೋಬರ್ 15 ರವರೆಗೆ ಮರಳು ಗಣಿ ಗುತ್ತಿಗೆ ಪ್ರದೇಶದಲ್ಲಿ ಮರಳು ಗಣಿಗಾರಿಕೆ ನಿಷೇಧವಿರುತ್ತದೆ. ಅದರಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮರಳು ಗಣಿ ಗುತ್ತಿಗೆ ಪ್ರದೇಶದಲ್ಲಿ ನಿಷೇಧವಿರುತ್ತದೆ. ಮರಳು ದಾಸ್ತಾನು ಕೇಂದ್ರಗಳಲ್ಲಿ ಲಭ್ಯವಿರುವ ಒಟ್ಟು 27,550 ಮೆ.ಟನ್ ಗಳಲ್ಲಿ ಮಾರ್ಚ್ 2025 ರಿಂದ ಇಲ್ಲಿಯವರೆಗೆ 12,126 ಮೆ.ಟನ್ ಅನ್ನು ಬುಕಿಂಗ್ ಆಪ್ ಮುಖಾಂತರ ವಿತರಿಸಲಾಗಿರುತ್ತದೆ.

ಅಲ್ಲದೆ ILMS (Integrated Lease Management System) ತಂತ್ರಾಂಶದಲ್ಲಿ 36,737 ಮೆ.ಟನ್ ಮರಳು ಸಾಗಾಣಿಕೆಯಾಗಿರುತ್ತದೆ. ಅಲ್ಲದೆ ಮರಳು ಗಣಿ ಗುತ್ತಿಗೆ ದಾಸ್ತಾನು ಕೇಂದ್ರದಲ್ಲಿ ಲಭ್ಯವಿರುವ 43,848 ಮೆ.ಟನ್ ಮರಳನ್ನು ಬುಕಿಂಗ್ ಮಾಡಲು dksandbazaar.com ವೆಬ್‌ಸೈಟ್‌ನಲ್ಲಿ ಬುಕ್ ಮಾಡಿಕೊಳ್ಳಬಹುದು.

ಯಾವುದೇ ಕಾರಣಕ್ಕೂ ಹೊರ ಜಿಲ್ಲೆಗೆ ಮರಳು ಪೂರೈಸಲು ಅವಕಾಶವಿರುವುದಿಲ್ಲ.ಹೆಚ್ಚಿನ ಮಾಹಿತಿಗೆ ಅಥವಾ ಡಿಕೆ ಸ್ಯಾಂಡ್ ಬಝಾರ್ ಬುಕಿಂಗ್‌ನಲ್ಲಿ ಯಾವುದೇ ತಾಂತ್ರಿಕ ತೊಂದರೆ ಇದ್ದಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಿರಿಯ ಭೂವಿಜ್ಞಾನಿಯವರ ಕಚೇರಿ (ದೂರವಾಣಿ ಸಂಖ್ಯೆ: 0824-2429932/ 6364019555) ಸಂಪರ್ಕಿಸಬಹುದು ಎಂದು ಹಿರಿಯ ಭೂವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.






ರೂರಲ್ ಮಿರರ್.ಕಾಂ

# ಬದುಕಿಗೆ ಧರ್ಮದ ತಳಹದಿ ಅಗತ್ಯ: ರಾಘವೇಶ್ವರ ಶ್ರೀ



ಧರ್ಮ ಎನ್ನುವ ತಳಹದಿಯಲ್ಲಿ ಬದುಕು ನಿಂತಿದೆ. ಅರ್ಥ ಮತ್ತು ಕಾಮನೆಗಳಿಗೆ ಧರ್ಮವೇ ತಳಹದಿ. ಮನೆಗೆ ಸುಭದ್ರ ಅಡಿಪಾಯ ಹೇಗೆ ಅಗತ್ಯವೋ ನಮ್ಮ ಬದುಕಿಗೂ ಧರ್ಮದ ತಳಹದಿ ಅಗತ್ಯ ಎಂದು ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀರಾಘವೇಶ್ವರಭಾರತೀಮಹಾಸ್ವಾಮೀಜಿ ನುಡಿದರು.

ಅಶೋಕೆಯಲ್ಲಿ ಚಾತುರ್ಮಾಸ್ಯ ವ್ರತ ಕೈಗೊಂಡಿರುವ ಶ್ರೀಗಳು ಶುಕ್ರವಾರ ಸಿದ್ದಾಪುರ ಮಂಡಲದ ಬಾನ್ಕುಳಿ, ಇಟಗಿ, ದೊಡ್ಮನೆ, ಚಪ್ಪರಮನೆ, ತಾಳಗುಪ್ಪ ಮತ್ತು ಇಡುವಾಣಿ ವಲಯಗಳ ಶಿಷ್ಯರಿಂದ ಸರ್ವಸೇವೆ ಸ್ವೀಕರಿಸಿ ಆಶೀರ್ವಚನ ಅನುಗ್ರಹಿಸಿದರು.

ಗೋಡೆ ಎಂದರೆ ಸಂಪತ್ತು; ಛಾವಣಿ ಎನ್ನುವುದು ಕಾಮನೆಗಳು. ಧರ್ಮದ ತಳಹದಿ ಇದ್ದರೆ ಮಾತ್ರ ಉಳಿದ ಎರಡು ಸಿದ್ಧಿಸುತ್ತವೆ. ಜೀವನದಲ್ಲಿ ತಪ್ಪು ಮಾಡದೇ ಧರ್ಮದ ಬೆಳಕಲ್ಲಿ ಜೀವನ ಮಾಡಬೇಕು ಎಂದು ಸಲಹೆ ಮಾಡಿದರು.

ಸೇವೆ ಎನ್ನುವುದು ಧರ್ಮಸಂಗ್ರಹಕ್ಕೆ ಅವಕಾಶ. ಪೀಠದ ಸೇವೆ ಜನ್ಮ ಜನ್ಮಾಂತರದಲ್ಲಿ ನಿಮ್ಮನ್ನು ಕಾಪಾಡುತ್ತವೆ. ಪುಣ್ಯಸಂಗ್ರಹಕ್ಕೆ ಇಂಥ ಜವಾಬ್ದಾರಿಗಳು ಒಳ್ಳೆಯ ಮಾರ್ಗ. ಸಿಕ್ಕಿದ ಸೇವಾ ಅವಕಾಶವನ್ನು ಸಮರ್ಥವಾಗಿ ಬಳಸಿಕೊಂಡು ಧನ್ಯತೆ ಪಡೆಯಬೇಕು ಎಂದು ಸೂಚಿಸಿದರು.

ವರ್ಷಕಾಲದಲ್ಲಿ ಗುರುದರ್ಶನಾರ್ಥವಾಗಿ, ರಾಮನ ದರ್ಶನಕ್ಕಾಗಿ ಆಗಮಿಸಿದ ಸಮಸ್ತ ಶಿಷ್ಯರ ಮೇಲೆ ಅನುಗ್ರಹದ ಮಳೆ ಸುರಿಯಲಿ ಎಂದು ಹರಸಿದರು. ಗೋಮಾತೆಯ ಸೇವೆ ಸಮಾಜದ ಪ್ರತಿಯೊಬ್ಬ ಶಿಷ್ಯರ ಕರ್ತವ್ಯ. ಗೋಸ್ವರ್ಗವನ್ನು ಬೆಳೆಸುವುದು ಸಿದ್ದಾಪುರ ಮಂಡಲದ ಸಮಸ್ತ ಶಿಷ್ಯರ ಕರ್ತವ್ಯ ಎಂದರು. ಈ ಬಾರಿಯ ನವರಾತ್ರಿ ಉತ್ಸವ ಸಾಗರದಲ್ಲಿ ನಡೆಯಲಿದ್ದು, ಸಿದ್ದಾಪುರ ಮಂಡಲದ ಜನತೆ ಈ ಪುಣ್ಯಕಾರ್ಯದಲ್ಲಿ ಪಾಲ್ಗೊಂಡು ಆತ್ಮೈಶ್ವರ್ಯ ಪಡೆದುಕೊಳ್ಳಲು ಅವಕಾಶ ಒದಗಿಬಂದಿದೆ ಎಂದು ಹೇಳಿದರು.

ಪುಣ್ಯನಿಧಿ ಸಂಪಾದನೆಗೆ ಅನುಷ್ಠಾನದ ಮಾರ್ಗವನ್ನು ಪ್ರತಿಯೊಬ್ಬರೂ ಅನುಸರಿಸಬೇಕು. ಧರ್ಮಧನವನ್ನು ಅಂತರಂಗದಲ್ಲಿ ಕೂಡಿಟ್ಟುಕೊಳ್ಳಬೇಕು. ಚಾತುರ್ಮಾಸ್ಯ ಇದಕ್ಕೆ ಹೇಳಿ ಮಾಡಿಸಿದ ಸಮಯ. ಸನಾತನ ಸಂಸ್ಕøತಿಯ ಹಿನ್ನೆಲೆ ಇರುವ, ಶಂಕರಾಚಾರ್ಯರಿಂದ ಸ್ಥಾಪಿತವಾದ ಅವಿಚ್ಛಿನ್ನ ಪರಂಪರೆಯ ಪೀಠದ ಶಿಷ್ಯರಾಗಿ ನಮಗೆ ದೊಡ್ಡ ಹೊಣೆಗಾರಿಕೆ ಇದೆ ಎಂದು ಕಿವಿಮಾತು ಹೇಳಿದರು.

ಹವ್ಯಕ ಮಹಾಮಂಡಲ ಅಧ್ಯಕ್ಷ ಹರಿಪ್ರಸಾದ್ ಪೆರಿಯಾಪ್ಪು, ಪ್ರಧಾನ ಕಾರ್ಯದರ್ಶಿ ಮಹೇಶ್ ಚಟ್ನಳ್ಳಿ, ಚಾತುರ್ಮಾಸ್ಯ ತಂಡದ ಪ್ರಧಾನ ಸಂಯೋಜಕ ಮಂಜುನಾಥ ಸುವರ್ಣಗದ್ದೆ, ವಿವಿವಿ ಆಡಳಿತಾಧಿಕಾರಿ ಡಾ.ಟಿ.ಜಿ.ಪ್ರಸನ್ನಕುಮಾರ್, ಮುಖ್ಯ ಅಭಿಯಂತರ ವಿಷ್ಣು ಬನಾರಿ ಮತ್ತಿತರರು ಉಪಸ್ಥಿತರಿದ್ದರು. ಚಾತುರ್ಮಾಸ್ಯ ಅಂಗವಾಗಿ ವೇದಮೂರ್ತಿ ಉಂಚಗೇರಿ ಸುಬ್ರಹ್ಮಣ್ಯ ಭಟ್ ನೇತೃತ್ವದಲ್ಲಿ ಸಾಮವೇದ ಪಾರಾಯಣ ನಡೆಯುತ್ತಿದೆ.

## ಫಸಲ್ ಭೀಮಾ ಯೋಜನೆ ಹಣ ಬಿಡುಗಡೆ

: ಕೇಂದ್ರ ಸರ್ಕಾರದ ಫಸಲ್ ಭೀಮಾ ಯೋಜನೆಯಡಿ ಅತಿ ಹೆಚ್ಚು ಬೆಳೆ ವಿಮೆ ಪಡೆದ ಜಿಲ್ಲೆಗಳ ಪಟ್ಟಿಯಲ್ಲಿ ರಾಜ್ಯದ ಕಲಬುರಗಿ ಹಾಗೂ ಗದಗ ಜಿಲ್ಲೆಗಳು ಮೊದಲ ಸ್ಥಾನದಲ್ಲಿವೆ. ಕಳೆದ ವರ್ಷ ಹಂಗಾಮಿ ಮುಂಗಾರಿನಿಂದ ಉಂಟಾದ ಬೆಳೆ ಹಾನಿಯಿಂದ ಇಲ್ಲಿನ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದರು.

ತೊಗರಿ,ಹತ್ತಿ,ಭತ್ತ,ರಾಗಿ, ಮೆಕ್ಕೆಜೋಳ, ಸೋಯಾಬಿನ್, ನೆಲಗಡಲೆ ಸೇರಿದಂತೆ ವಿವಿಧ ಬೆಳೆಗಳಿಗೆ ಬೆಳೆವಿಮೆ ಮಾಡಿಸಿದ ಫಲವಾಗಿ ಇದೀಗ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಫಸಲ್ ಭೀಮಾ ಯೋಜನೆಯಡಿ ರಾಜ್ಯಕ್ಕೆ 14ಸಾವಿರದ 48 ಕೋಟಿ ಹಣ ಬಿಡುಗಡೆಯಾಗಿದೆ.

## ಎತ್ತಿನಹೊಳೆ ಯೋಜನೆಗೆ ಅತ್ಯಂತ ಎತ್ತರದ ಮೇಲ್ಸೇತುವೆ - ಚೇಳೂರು ಬಳಿ ನಿರ್ಮಾಣ

ಕೋಲಾರ– ಚಿಕ್ಕಬಳ್ಳಾಪುರ ಸೇರಿದಂತೆ ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಎತ್ತಿನಹೊಳೆ ಯೋಜನೆಗೆ ತುಮಕೂರು ಜಿಲ್ಲೆ ಬೆಳ್ಳಾವಿಯ ಬಳಿಯ ಚೇಳೂರು ಎಂಬಲ್ಲಿ ನಿರ್ಮಾಣವಾಗಿರುವ ಅಕ್ವಾಡಾಕ್ಟ್ ಮೇಲ್ಗಾಲುವೆ ದೇಶದ ಗಮನ ಸೆಳೆಯುತ್ತಿದೆ. ದೇಶದ ಅತಿ ಎತ್ತರದ ಹಾಗೂ ಏಷ್ಯಾದಲ್ಲಿಯೇ ಅತಿ ಉದ್ದದ ಮೇಲ್ಗಾಲುವೆ ಇದಾಗಿದೆ. 10.4 ಕಿಲೋಮೀಟರ್ ಉದ್ದದ ಈ ಮೇಲ್ಗಾಲುವೆ ಕಾಮಗಾರಿ 2018ರಲ್ಲಿ ಆರಂಭವಾಗಿತ್ತು. ಕೋವಿಡ್-19 ಮತ್ತು ಭೂ ಸ್ವಾಧೀನ ಪ್ರಕ್ರಿಯೆಯಲ್ಲಿ ಎದುರಾದ ಸವಾಲುಗಳಿಂದ ವಿಳಂಬವಾಗಿ 2023ರಲ್ಲಿ ಪೂರ್ಣಗೊಂಡಿದ್ದು, ಇದೀಗ ರಾಷ್ಟ್ರ ಮನ್ನಣೆ ಪಡೆದುಕೊಂಡಿದೆ. ಸುಮಾರು 1 ಸಾವಿರದ 203 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ಅಕ್ವಾಡಾಕ್ಟ್ 120 ಅಡಿ ಎತ್ತರದಲ್ಲಿದ್ದು, 3,300 ಕ್ಯೂಸೆಕ್ ನೀರನ್ನು ಸಾಗಿಸುವ ಸಾಮರ್ಥ್ಯ ಹೊಂದಿದೆ. ಯೋಜನೆ ರಾಜ್ಯ ಜಲಸಂಪನ್ಮೂಲ ನಿರ್ವಹಣೆಯಲ್ಲಿ ಒಂದು ಮಹತ್ವದ ಮೈಲಿಗಲ್ಲಾಗಲಿದೆ.

ಹೆಚ್ಚಿನ ಓದಿಗೆ : www.theruralmirror.com